**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,ರವರ ನ್ಯಾಯಾಲಯ, ಕಡೂರು**

**ಓ.ಎಸ್.ನಂ.280/2019**

**ದಿನಾಂಕಃ31.03.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

ಪಿ.ಡಬ್ಲ್ಯುಃ1

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀಮತಿ.ಜಿ.ಸಿ.ಎಸ್. ವಕೀಲರಿಂದಃ-**

ನಾನು ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ, ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ನನ್ನ ಮುಖ್ಯ ವಿಚಾರಣೆಯೊಂದಿಗೆ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಹಕ್ಕು ಬದಲಾವಣೆ ವಹಿಯ ದೃಢೀಕೃತ ನಕಲನ್ನು ನಿಪಿ-2 ಎಂದು, ವಂಶವೃಕ್ಷದ ದೃಢೀಕರಣ ಪತ್ರವನ್ನು ನಿಪಿ-3 ಎಂದು, ಸ್ವತ್ತಿನ ಮೇಲೆ ಋಣಭಾರ ರಾಹಿತ್ಯ ಪ್ರಮಾಣಪತ್ರವನ್ನು ನಿಪಿ-4 ಎಂದದು, ನೋಟೀಸಿನ ಕಛೇರಿ ಪ್ರತಿಯನ್ನು ನಿಪಿ-5 ಎಂದು, ಅಂಚೆ ರಶೀದಿಗಳನ್ನು ನಿಪಿ-6 ಮತ್ತು 7 ಎಂದು, ಅಂಚೆ ಸ್ವೀಕೃತಿಗಳನ್ನು ನಿಪಿ-8 ಮತ್ತು ನಿಪಿ-9 ಎಂದು, ಉಪ ವಿಭಾಗಾಧಿಕಾರಿಗಳು, ತರೀಕೆರೆ ರವರಿಗೆ ಸಲ್ಲಿಸಿರುವ ಮನವಿ ಪತ್ರವನ್ನು ನಿಪಿ-9 ಎಂದು, ಉಪ ವಿಭಾಗಾಧಿಕಾರಿಗಳು ನೀಡಿರುವ ಪತ್ರವನ್ನು ನಿಪಿ-10 ಎಂದು, ಉಪ ವಿಭಾಗಾಧಿಕಾರಿಗಳು ನೀಡಿರುವ ವಿಚಾರಣ ನೋಟೀಸನ್ನು ನಿಪಿ-11 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ ಸಮಯ ಕೋರಿದ್ದು, ಮುಂದೂಡಲಾಯಿತು.**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ದೀಪು ಎಂ.ಟಿ.)

3 ನೇ.ಹೆ.ಪ್ರಃದಃನ್ಯಾಃದಂ.,ರವರು, ಕಡೂರು.